ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲಗಳ ಸಚಿವರು):–

ಅ) 2010–11ನೇ ಸಾಲಿನಲ್ಲಿ RIDF-XVI ಅಡಿ (Rural Infrastructure Development Fund) ಜೌಗು, ಸವಳು ಹಾಗೂ ಜವಳು ಭೂಮಿ ಸುದಾರಣೆಯ ರೂ. 80.00 ಕೋಟಿ ಮೊತ್ತದ 30 ಕಾಮಗಾರಿಗಳಿಗೆ ಮಂಜೂರಾತಿ ಪಡೆಯಲಾಗಿದೆ.

2010–11ನೇ ಸಾಲಿನಲ್ಲಿ RIDF-XVI ಅಡಿ (Rural Infrastructure Development Fund) ಕಾಮಗಾರಿಗಳ ಮಂಜೂರಾತಿ ಪ್ರಕ್ರಿಯೆ ಪರಿಶೀಲನೆಯಲ್ಲಿದೆ.

ಆ) ಇದುವರೆಗೂ, ಮೇಲ್ಕಂಡ ಕಾಮಗಾರಿಗಳ ಪೈಕಿ 27 ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಇ) ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ

ಸರ್ಕಾರಿ ಕಛೇರಿಗಳಲ್ಲಿ ಕನ್ನಡ

58 (262) ಶ್ರೀ ಎಸ್. ಆರ್. ವಿಶ್ವನಾಥ್ (ಯಲಹಂಕ):– ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸರ್ಕಾರದ ಇಲಾಖೆಗಳಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಳಸಲು ಆದೇಶವಿದ್ದರೂ ಸಹ ಕೆಲವು ಇಲಾಖೆಗಳಲ್ಲಿ ಕನ್ನಡವನ್ನು ಬಳಸದೆ ಆಂಗ್ಲ ಭಾಷೆಯನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸಂಪೂರ್ಣವಾಗಿ ಕನ್ನಡವನ್ನು ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಬಳಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು):–

ಅ) ಪ್ರಸ್ತುತ ಲಭ್ಯವಿರುವ ಮಾಹಿತಿ ಪ್ರಕಾರ ಸರ್ಕಾರದ ಆದೇಶ ಮತ್ತು ಸುತ್ತೋಲೆಗಳಿಗೆ ಅನುಗುಣವಾಗಿ ಸರ್ಕಾರದ ಎಲ್ಲಾ ಇಲಾಖೆಗಳ ಆಡಳಿತದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸಲಾಗುತ್ತಿದೆ.

ಆ) 1) ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಆಡಳಿತ ತರಬೇತಿ ಸಂಸ್ಥೆ, ಮೈಸೂರು ಹಾಗೂ ಕನ್ನಡ ವಿಶ್ವವಿದ್ಯಾಲಯ, ಹಂಪಿ ಇವುಗಳ ಸಹಯೋಗದಿಂದ ಜಿಲ್ಲಾಮಟ್ಟ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಕನ್ನಡದ ಯಶಸ್ವೀ ಅನುಷ್ಠಾನಕ್ಕಾಗಿ ಜಿಲ್ಲಾ ಸಮಿತಿ ಹಾಗೂ ತಾಲ್ಲೂಕು ಸಮಿತಿಗಳನ್ನು ರಚಿಸಿ ಎಲ್ಲಾ ಅಧಿಕಾರಿ, ಸಿಬ್ಬಂದಿ ವರ್ಗದವರಿಗೆ ಆಡಳಿತ ಕನ್ನಡ ಕಾರ್ಯ ಶಿಬಿರವನ್ನು ನಡೆಸಲಾಗುತ್ತಿದೆ.

2) ಸರ್ಕಾರದ ಸುತ್ತೋಲೆ ಸಂಖ್ಯೆ: ಕಸಂವಾಪ್ರ 28 ಕೆಒಎಲ್ 2010, ದಿನಾಂಕ 02–03–2010ರ ರಾಜ್ಯದ ಆಡಳಿತದ ಎಲ್ಲಾ ಹಂತಗಳಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಳಸುವಂತೆಯೂ, ಆಡಳಿತದಲ್ಲಿ ಕನ್ನಡವನ್ನು ಬಳಸದೆ ಯಾವುದೇ ಹಂತದ ಮತ್ತು ಯಾವುದೇ ಶ್ರೇಣಿಯ ಅಧಿಕಾರಿಗಳಿಗೆ ರಿಯಾಯಿತಿ ಅಥವಾ ಔದಾರ್ಯ ತೋರದೆ ಅವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲು ಅವರ ವಾರ್ಷಿಕ ವರದಿಗಳಲ್ಲಿ ಈ ವಿಷಯವನ್ನು ನಮೂದಿಸುವಂತೆ ರಾಜ್ಯ ಸರ್ಕಾರದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ನೇಕಾರರಿಗೆ ರೇಷ್ಮೆ ಆಮದಿನಿಂದ ಆಗುತ್ತಿರುವ ತೊಂದರೆ

59 (264) ಶ್ರೀ ಎಸ್. ಆರ್. ವಿಶ್ವನಾಥ್ (ಯಲಹಂಕ):– ಮಾನ್ಯ ಜವಳಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಚೈನಾ ದೇಶದಿಂದ ಆಮದು ಮಾಡಿಕೊಳ್ಳುವ ರೇಷ್ಮೆಗೆ ಶೇ. 30 ರಷ್ಟು ತೆರಿಗೆ ವಿಧಿಸುತ್ತಿರುವುದರಿಂದ ಕಚ್ಚಾ ರೇಷ್ಮೆ ಖರೀದಿ ಮಾಡಲಾಗದೆ ನೇಕಾರರು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ನೇಕಾರರಿಗೆ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಇ) ದುಬಾರಿ ಬೆಲೆ ತೆತ್ತು ಕಚ್ಚಾ ರೇಷ್ಮೆ ಖರೀದಿಸಿದ ನೇಕಾರರಿಗೆ ಬಟ್ಟೆ ಮಾರಲು ಮಾರುಕಟ್ಟೆ ಸಿಗದೆ ತೊಂದರೆಯಾಗಿರುವುದರಿಂದ ನೇಕಾರರು ತಯಾರು ಮಾಡಿದ ಬಟ್ಟೆಗಳಿಗೆ ಸ್ಥಿರತೆ ಕಾಪಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್. ವರ್ತೂರ್ ಪ್ರಕಾಶ್ (ಜವಳಿ ಸಚಿವರು):–

ಅ) ಬಂದಿದೆ